ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರುವರಿ, 2021

ಮುಜರಾಯಿ ದೇವಸ್ಥಾನಗಳ ಸ್ಥಿರಾಸ್ತಿಗಳ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

245 (337) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾಸನ ಜಿಲ್ಲೆಯಲ್ಲಿರುವ ಮುಜರಾಯಿ ದೇವಾಲಯಗಳ ಸಂಖ್ಯೆ ಹಾಗೂ ಇವುಗಳ ಸ್ಥಿರಾಸ್ತಿ ಎಷ್ಟು ; (ತಾಲ್ಲೂಕುವಾರು ಮತ್ತು ದೇವಸ್ಥಾನವಾರು ವಿವರ ನೀಡುವುದು)

(ಆ) ಈ ದೇವಾಲಯಗಳಿಗೆ ಸಂಬಂಧಿಸಿದ ಜಮೀನುಗಳು ಒತ್ತುವರಿಯಾಗಿರುವ ಪ್ರಕರಣಗಳೆ ಷ್ಟು; ಈ ಒತ್ತುವರಿಯಾಗಿರುವ ಜಮೀನುಗಳನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಪ್ರಕರಣವಾರು ವಿವರ ನೀಡುವುದು)

(ಇ) ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿರುವ ಮುಜುರಾಯಿ ದೇವಾಲಯಗಳಿಂದ ಸರ್ಕಾರಕ್ಕೆ ಬಂದ ಆದಾಯವೆಷ್ಟು; ಈ ದೇವಸ್ಥಾನಗಳ ಉಸ್ತುವಾರಿ ಮತ್ತು ರಕ್ಷಣಾ ಕಾರ್ಯಗಳಿಗಾಗಿ ಖರ್ಚಾಗಿರುವ ಮೊತ್ತವೆಷ್ಟು ? (ಪ್ರತಿ ದೇವಸ್ಥಾನದ ವಿವರ ನೀಡುವುದು)